ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 221
2.	ಸದಸ್ಯರ ಹೆಸರು	: ಶ್ರೀ ಪಿ.ಆರ್. ರಮೇಶ್
3.	ಉತ್ತರಿಸಬೇಕಾದ ದಿನಾಂಕ	: 02.02.2021
4.	ಉತ್ತರಿಸುವವರು	: ಸಣ್ಣ ನೀರಾವರಿ ಸಚಿವರು.

ಕ್ರಮ ಸಂ.	ಪ್ರಶ್ನೆ	ಉತ್ತರ
ಅ	ಬೆಂಗಳೂರು ನಗರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂತರ್ಜಲ ಕುಸಿತದ ಕುರಿತು ಗಣಿ ಮತ್ತು ಭೂವಿಜ್ಞಾನ ಇಲಾಖೆವತಿಯಿಂದ ಯಾವುದಾದರೂ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು)	ಅಂತರ್ಜಲ ನಿರ್ದೇಶನಾಲಯದಿಂದ ಪ್ರತಿ ಮಾಹೆಯಾನ ದಾಖಲಿಸಿದ ಬಾವಿ / ಕೊಳವೆಬಾವಿಗಳ ಅಂತರ್ಜಲ ಸ್ಥಿರ ಜಲಮಟ್ಟ ಮಾಪನದಂತೆ 10 ವರ್ಷಗಳ (2010 ರಿಂದ 2019ರ ವರೆಗಿನ) ವಾರ್ಷಿಕ ಸರಾಸರಿ ಅಂತರ್ಜಲ ಸ್ಥಿರಮಟ್ಟದ ವ್ಯತ್ಯಾಸದಂತೆ ಬೆಂಗಳೂರು ನಗರ ಜಿಲ್ಲೆಯ 4 ತಾಲ್ಲೂಕುಗಳ ಪೈಕಿ 4 ತಾಲ್ಲೂಕುಗಳಲ್ಲಿ ಕುಸಿತ ಕಂಡು ಬಂದಿರುತ್ತದೆ. ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. ಅಂತರ್ಜಲ ನಿರ್ದೇಶನಾಲಯವು ಕೇಂದ್ರೀಯ ಅಂತರ್ಜಲ ಮಂಡಳಿಯವರ ಸಹಯೋಗದೊಂದಿಗೆ ರಾಜ್ಯದ ಅಂತರ್ಜಲ ಸಂಪನ್ಮೂಲವನ್ನು ಮಾರ್ಚ್-2017ರ ಅಂತ್ಯಕ್ಕೆ ಮೌಲೀಕರಿಸಿದಂತೆ, 45 ತಾಲ್ಲೂಕುಗಳು "ಅಂತರ್ಜಲ ಅತಿಬಳಕೆ" (ಅಂತರ್ಜಲ ಬಳಕೆಯು ವಾರ್ಷಿಕ ಮರುಪೂರಣ ಪ್ರಮಾಣದ ಶೇ. 100 ಕ್ಕಿಂತ ಹೆಚ್ಚು ಬಳಕೆ), "ಕ್ಲಿಷ್ಟಕರ"-08 ತಾಲ್ಲೂಕುಗಳು (ಅಂತರ್ಜಲ ಬಳಕೆಯು ವಾರ್ಷಿಕ ಮರುಪೂರಣ ಪ್ರಮಾಣದ ಶೇ. 90 ರಿಂದ 100), "ಅರೆಕ್ಲಿಷ್ಟಕರ"-26 ತಾಲ್ಲೂಕುಗಳು (ಅಂತರ್ಜಲ ಬಳಕೆಯು ವಾರ್ಷಿಕ ಮರುಪೂರಣ ಪ್ರಮಾಣದ ಶೇ. 70 ರಿಂದ 90), "ಸುರಕ್ಷಿತ"-97 ತಾಲ್ಲೂಕುಗಳು (ಅಂತರ್ಜಲ ಬಳಕೆಯು ವಾರ್ಷಿಕ ಮರುಪೂರಣ ಪ್ರಮಾಣದ ಶೇ. 70 ಕ್ಕಿಂತ ಕಡಿಮೆ) ಎಂದು ವರ್ಗೀಕರಿಸಲಾಗಿದೆ. ಅದರಲ್ಲಿ ಬೆಂಗಳೂರು ನಗರ ಜಿಲ್ಲೆಯ ನಾಲ್ಕು ತಾಲ್ಲೂಕುಗಳನ್ನು ಅತಿಬಳಕೆ ತಾಲ್ಲೂಕುಗಳೆಂದು ವರ್ಗೀಕರಿಸಲಾಗಿರುತ್ತದೆ. ಕ್ರ.ಸಂ / ತಾಲ್ಲೂಕುಗಳು / ಅಂತರ್ಜಲದ ಬಳಕೆ ಶೇಕಡಾ / ವರ್ಗೀಕರಣ 1. / ಆನೇಕಲ್ / 134 / ಅತಿಬಳಕೆ 2. / ಬೆಂಗಳೂರು ಉತ್ತರ / 131 / ಅತಿಬಳಕೆ 3. / ಬೆಂಗಳೂರು ದಕ್ಷಿಣ / 188 / ಅತಿಬಳಕೆ 4. / ಬೆಂಗಳೂರು ಪೂರ್ವ / 134 / ಅತಿಬಳಕೆ ಮಾರ್ಚ್-2020ರ ಅಂತ್ಯಕ್ಕೆ ಅಂತರ್ಜಲ ಮೌಲೀಕರಣ ಕಾರ್ಯವು ಪ್ರಗತಿಯಲ್ಲಿರುತ್ತದೆ.
ಆ	ಈ ಪ್ರಸ್ತಾಪಿತ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)	ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಧಾನ ಇಂಜಿನಿಯರ್, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ, ದಿನಾಂಕ:31.12.2012ರಂದು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

		ಸದರಿ ಅಧಿನಿಯಮವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಅಧಿಸೂಚನೆ ದಿನಾಂಕ: 31.12.2012ರಂದು ಪ್ರಕರಣ 23ರಡಿ ಯಲ್ಲಿ ಅನುಷ್ಠಾನಾಧಿಕಾರಿಗಳಿಂದು ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿರುತ್ತದೆ ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ. ಅಂತರ್ಜಲ ನಿರ್ದೇಶನಾಲಯದ ವತಿಯಿಂದ ಅಂತರ್ಜಲ ಅಭಿವೃದ್ಧಿ. ಸದ್ಬಳಕೆ ಮತ್ತು ಸಂರಕ್ಷಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಲುವಾಗಿ ತಾಲ್ಲೂಕು / ಶಾಲಾ ಕಾಲೇಜು ಮಟ್ಟದಲ್ಲಿ ಜನ ಜಾಗೃತಿ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ.
ಇ	ಬೆಂಗಳೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವೈಜ್ಞಾನಿಕವಾಗಿ ಅಂತರ್ಜಲ ಮಟ್ಟದ ಸಮೀಕ್ಷೆ ನಡೆಸಲು ಯಾವುದಾದರೂ ವೈಜ್ಞಾನಿಕ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆಯೇ; ಅಥವಾ ಮಾಡಿಕೊಳ್ಳಲು ಚಿಂತನೆ ನಡೆಸಿದೆಯೇ; (ವಿವರ ನೀಡುವುದು)	ಬೆಂಗಳೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವೈಜ್ಞಾನಿಕವಾಗಿ ಅಂತರ್ಜಲಮಟ್ಟದ ಸಮೀಕ್ಷೆ ನಡೆಸಲು ಯಾವುದೇ ಸಂಸ್ಥೆಯೊಂದಿಗೆ ಒಡಂಬಡಿಕೆಯನ್ನು ಮಾಡಿಕೊಂಡಿರುವುದಿಲ್ಲ.
ಈ	ಅಂತರ್ಜಲ ಕುಸಿತದ ಕಾರಣಗಳನ್ನು ಪತ್ತೆ ಹಚ್ಚುವ ಮತ್ತು ಅದಕ್ಕೆ ಪೂರಕವಾಗಿ ಕ್ರಮ ಕೈಗೊಳ್ಳುವ ನಿಯಮಗಳನ್ನು ಸರ್ಕಾರವು ಜಾರಿಗೊಳಿಸಲಾಗಿದೆಯೇ; ಅಥವಾ ಪ್ರಸ್ತುತ ಪರಿಸ್ಥಿತಿಗೆ ಅನುಗುಣವಾಗಿ ಜಾರಿಯಲ್ಲಿರುವ ನಿಯಮಗಳಿಗೆ ತಿದ್ದುಪಡಿ ತರುವ ಚಿಂತನೆ ನಡೆಸಲಾಗಿದೆಯೇ? (ವಿವರ ನೀಡುವುದು)	ಅಂತರ್ಜಲ ಸಂರಕ್ಷಣೆ, ಅಭಿವೃದ್ಧಿ ಮತ್ತು ಸದ್ಬಳಕೆ ಹಾಗೂ ನಿರ್ವಹಣೆಯನ್ನೇ ಪ್ರಮುಖ ಉದ್ದೇಶವಾಗಿಟ್ಟುಕೊಂಡು ಸರ್ಕಾರವು ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ಅಧಿನಿಯಮ 2011 ಮತ್ತು ನಿಯಮಾವಳಿ 2012 ನ್ನು ಜಾರಿಗೆ ತಂದಿರುತ್ತದೆ. ಈ ಅಧಿನಿಯಮದ ನಿಯಮಗಳನ್ನು ಅನುಷ್ಠಾನಗೊಳಿಸಲು ಸರ್ಕಾರವು "ಕರ್ನಾಟಕ ಅಂತರ್ಜಲ ಪ್ರಾಧಿಕಾರ"ವನ್ನು ರಚಿಸಿದೆ. ಆಯಾ ಜಿಲ್ಲೆಯ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಜಿಲ್ಲಾಮಟ್ಟದ ಸಮಿತಿಗಳನ್ನು ರಚಿಸಲಾಗಿದ್ದು ಮತ್ತು ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಧಾನ ಇಂಜಿನಿಯರ್, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿರವರ ಅಧ್ಯಕ್ಷತೆಯಲ್ಲಿ ಜಿಲ್ಲಾಸಮಿತಿಯನ್ನು ರಚಿಸಿ, ದಿನಾಂಕ:31.12.2012 ರಂದು ಅಧಿಸೂಚನೆಯನ್ನು ಹೊರಡಿಸಲಾಗಿದೆ. ವಿವರಗಳನ್ನು ಅನುಬಂಧ-03ರಲ್ಲಿ ನೀಡಲಾಗಿದೆ. ಪ್ರಸ್ತುತ ಇರುವ ಪರಿಸ್ಥಿತಿಗೆ ಅನುಗುಣವಾಗಿ ಅಧಿನಿಯಮ ಜಾರಿಯಲ್ಲಿರುವುದರಿಂದ ತಿದ್ದುಪಡಿ ಪ್ರಸ್ತಾವನೆ ಇರುವುದಿಲ್ಲ.

ಸಂಖ್ಯೆ: ಸನೀಇ 10 ವಿಪವಿ 2021

(ಜೆ.ಸಿ ಮಾಧುಸ್ವಾಮಿ)
ಸಣ್ಣ ನೀರಾವರಿ ಸಚಿವರು.

[illegible]

ಅನುಬಂಧ - 1

10 years average static water level														
Sl. No.	District	Taluk	2010	2011	2012	2013	2014	2015	2016	2017	2018	2019	Average Static water level difference between 2010 to 2019	
													Rise	Fall
1	Bangaluru Urban	Anekal	15.68	16.86	21.75	24.86	26.10	26.06	26.37	34.71	32.53	34.21		18.53
2	Bangaluru Urban	Bangalore north	20.72	23.53	30.90	39.81	40.85	37.74	28.88	29.04	20.62	28.28		7.56
3	Bangaluru Urban	Bangalore south	17.03	19.21	24.43	28.62	34.32	32.66	22.08	21.06	20.15	21.80		4.77
4	Bangaluru Urban	Bangalore East	16.79	28.81	18.33	20.50	18.80	22.65	18.91	22.87	28.65	35.74		18.95

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಶ್ರೀ. ಆರ್. ರಮೇಶ್. ಇವರು ಮಂಡಿಸಿರುವ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 221 ಕ್ಕೆ ಉತ್ತರಿಸುವ ಬಗ್ಗೆ. ಅನುಬಂಧ-2

-6-

ಕರ್ನಾಟಕ ಸರ್ಕಾರ

ಸಂಖ್ಯೆ: ಸನೀಇ 13 ಅಜಅ 2011

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 31-12-2012.

ಅಧಿಸೂಚನೆ

ರಾಜ್ಯದಲ್ಲಿ ಅಂತರ್ಜಲ ಅಭಿವೃದ್ಧಿ ಮತ್ತು ಅತಿಬಳಕೆ ನಿಯಂತ್ರಣ ಕುರಿತು ಜಾರಿಯಾಗಿರುವ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ಅಧಿನಿಯಮ 2011ರ 3ನೇ ಪ್ರಕರಣ 1ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ ಕರ್ನಾಟಕ ರಾಜ್ಯ ಸರ್ಕಾರವು ಇಡೀ ಕರ್ನಾಟಕ ರಾಜ್ಯಕ್ಕೆ ಅನ್ವಯಿಸುವಂತೆ ದಿನಾಂಕ:16-03-2012 ರಂದು ಕರ್ನಾಟಕ ಅಂತರ್ಜಲ ಪ್ರಾಧಿಕಾರವನ್ನು ರಚಿಸಲಾಗಿದೆ. ಸದರಿ ಅಧಿನಿಯಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 6 ನಿರ್ವಹಣೆ ವಿಭಾಗಗಳ ಕಾರ್ಯಪಾಲಕ ಇಂಜನಿಯರ್‌ಗಳಿಗೆ ಅಧಿಕಾರ ಪ್ರತ್ಯಾಯೋಜಿಸಿರುವುದನ್ನು ಹಿಂಪಡೆದು ಈ ಕೆಳಕಂಡ 09 ನಿರ್ವಹಣೆ ವಿಭಾಗಗಳ ಕಾರ್ಯನಿರ್ವಾಹಕ ಅಭಿಯಂತರರನ್ನೊಳಗೊಂಡಂತೆ ಪ್ರಧಾನ ಇಂಜನಿಯರ್‌ರವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ.

1.	ಪ್ರಧಾನ ಇಂಜನಿಯರ್, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ.	ಅಧ್ಯಕ್ಷರು
2.	ಉಪ ಮುಖ್ಯ ಇಂಜನಿಯರ್, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.	ಸದಸ್ಯ ಕಾರ್ಯದರ್ಶಿಗಳು
3.	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರ ಪ್ರತಿನಿಧಿಗಳು.	ಸದಸ್ಯರು
4.	ಪೋಲೀಸ್ ಆಯುಕ್ತರು, ಬೆಂಗಳೂರು ಮಹಾನಗರ ಬೆಂಗಳೂರು ರವರ ಪ್ರತಿನಿಧಿಗಳು.	ಸದಸ್ಯರು
5.	ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಬೆಂಗಳೂರವರ ಪ್ರತಿನಿಧಿ.	ಸದಸ್ಯರು
6.	ಸಂಬಂಧಿಸಿದ ಪರಿಸರ ಅಧಿಕಾರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು.	ಸದಸ್ಯರು
7.	ಕಾರ್ಯನಿರ್ವಾಹಕ ಇಂಜನಿಯರ್, ಕೇಂದ್ರ ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, ಮಿಲ್ಲರ್ಸ್ ರೋಡ್, ಹೈಗ್ರೌಂಡ್, ಬೆಂಗಳೂರು-52.	ಸದಸ್ಯರು
8.	ಕಾರ್ಯನಿರ್ವಾಹಕ ಇಂಜನಿಯರ್, ದಕ್ಷಿಣ ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, 27ನೇ ಕ್ರಾಸ್, ಬಿಡಿಎ ಕಾಂಪ್ಲೆಕ್ಸ್ ಹತ್ತಿರ, 4ನೇ ಬ್ಲಾಕ್, ಜಯನಗರ, ಬೆಂಗಳೂರು-11.	ಸದಸ್ಯರು

9.	ಕಾರ್ಯನಿರ್ವಾಹಕ ಇಂಜಿನಿಯರ್, ದಕ್ಷಿಣ-ಪಶ್ಚಿಮ (ನೈರುತ್ಯ) ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, 27ನೇ ಕ್ರಾಸ್, ಬಿಡಿಎ ಕಾಂಪ್ಲೆಕ್ಸ್ ಹತ್ತಿರ, 4ನೇ ಬ್ಲಾಕ್, ಜಯನಗರ, ಬೆಂಗಳೂರು-11.	ಸದಸ್ಯರು
10.	ಕಾರ್ಯನಿರ್ವಾಹಕ ಇಂಜಿನಿಯರ್, ಪಶ್ಚಿಮ ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, ಅರ್ಕಾವತಿ ಭವನ, 2ನೇ ಮಹಡಿ, 5ನೇ ಮೈನ್, 9ನೇ ಕ್ರಾಸ್, ಆರ್‌ಪಿಸಿ ಬಡಾವಣೆ, ಬೆಂಗಳೂರು-40.	ಸದಸ್ಯರು
11.	ಕಾರ್ಯನಿರ್ವಾಹಕ ಇಂಜಿನಿಯರ್, ಸೌತ್ ಈಸ್ಟ್ (ಆಗ್ನೇಯ) ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, 10ನೇ ಮೈನ್, 15ನೇ ಕ್ರಾಸ್, 2ನೇ ಹಂತ, ಇಂದಿರಾ ನಗರ, ಬೆಂಗಳೂರು-38.	ಸದಸ್ಯರು
12.	ಕಾರ್ಯನಿರ್ವಾಹಕ ಇಂಜಿನಿಯರ್, ಪೂರ್ವ ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, 10ನೇ ಮೈನ್, 15ನೇ ಕ್ರಾಸ್, 2ನೇ ಹಂತ, ಇಂದಿರಾನಗರ, ಬೆಂಗಳೂರು-38.	ಸದಸ್ಯರು
13.	ಕಾರ್ಯನಿರ್ವಾಹಕ ಇಂಜಿನಿಯರ್, ಉತ್ತರ ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-55.	ಸದಸ್ಯರು
14.	ಕಾರ್ಯನಿರ್ವಾಹಕ ಇಂಜಿನಿಯರ್, ಉತ್ತರ ಪೂರ್ವ (ಈಶಾನ್ಯ) ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-55.	ಸದಸ್ಯರು
15.	ಕಾರ್ಯಪಾಲಕ ಇಂಜಿನಿಯರ್, ಉತ್ತರ ಪಶ್ಚಿಮ (ವಾಯುವ್ಯ) ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, ಮೋದಿ ಆಸ್ಪತ್ರೆ ರಸ್ತೆ, ಪಶ್ಚಿಮ ಕಾರ್ಡ್ ರಸ್ತೆ, ಬೆಂಗಳೂರು.	ಸದಸ್ಯರು
16.	ಹಿರಿಯ ಭೂವಿಜ್ಞಾನಿ (ಅಂತರ್ಜಲ), ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಬೆಂಗಳೂರು.	ಸದಸ್ಯರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಸಿದ್ದಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ(ಸಣ್ಣ ನೀರಾವರಿ)

ಸಂಕಲನಕಾರರು:

ಕರ್ನಾಟಕ ರಾಜ್ಯ ಪತ್ರ ಬೆಂಗಳೂರು – ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಲ್ಲಿಸುವುದು.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3. ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ವಿ.ಎಸ್. ರಮೇಶ್ ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 221 ಕ್ಕೆ ಅನುಬಂಧ-3

ಕರ್ನಾಟಕ ಸರ್ಕಾರ

ಸಂಖ್ಯೆ: ಸನೀಇ 13 ಅಜಅ 2011

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 31-12-2012.

ಅಧಿಸೂಚನೆ

ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ಅಧಿನಿಯಮ 2011ರ ಪ್ರಕರಣ 23ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಕಾಲಂ 3 ರಲ್ಲಿನ ಪ್ರಕರಣ 17, 31, 32, 33 ಮತ್ತು 34 ಹಾಗೂ ನಿಯಮ 6 ಮತ್ತು 7ನ್ನು ಅನುಷ್ಠಾನಗೊಳಿಸಲು ಈ ಕೆಳಕಂಡ ಅಧಿಕಾರಿಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಕ್ಷಮ ಅನುಷ್ಠಾನಾಧಿಕಾರಿಗಳೆಂದು ಅಧಿಕಾರವನ್ನು ಪ್ರತ್ಯಾಯೋಜಿಸಿದೆ.

ಕ್ರ ಸಂ	ಅಧಿಕಾರಿಗಳು	ಪ್ರಕರಣ/ನಿಯಮಗಳು	ವ್ಯಾಪ್ತಿ
1	2	3	4
1.	ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.	ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ.
2.	ಪೋಲಿಸ್ ಆಯುಕ್ತರು, ಬೆಂಗಳೂರು ಮಹಾನಗರ, ಬೆಂಗಳೂರು.	ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ.
3.	ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ	ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ.
4.	ಪ್ರಧಾನ ಇಂಜನಿಯರ್, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ.	ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ.
5.	ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಬೆಂಗಳೂರು.	ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ.
6.	ಜಂಟಿ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ದಕ್ಷಿಣ ವಲಯ, ಮೈಸೂರು.	ಪ್ರಕರಣ 17,31,32,33,34	ಅಧಿಕಾರ ವ್ಯಾಪ್ತಿ ಪ್ರದೇಶ
7.	ಉಪ ಮುಖ್ಯ ಇಂಜನಿಯರ್, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.	ನಿಯಮ 6 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ.
8.	ಪರಿಸರ ಅಧಿಕಾರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು.	ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ.

9.	ಕಾರ್ಯನಿರ್ವಾಹಕ ಇಂಜಿನಿಯರ್, ಕೇಂದ್ರ ವಿಭಾಗ, ಬಿಡಬ್ಲ್ಯೂಎಸ್ಎಸ್‌ಬಿ, ಮಿಲ್ಲರ್ಸ್ ರೋಡ್, ಹೈಗ್ರೌಂಡ್, ಬೆಂಗಳೂರು–05	ನಿಯಮ 7 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಸಂಬಂಧಿಸಿದ ನಿರ್ವಹಣೆ ವಿಭಾಗ.
10	ಕಾರ್ಯನಿರ್ವಾಹಕ ಇಂಜಿನಿಯರ್, ದಕ್ಷಿಣ ವಿಭಾಗ, ಬಿಡಬ್ಲ್ಯೂಎಸ್ಎಸ್‌ಬಿ, 27ನೇ ಕ್ರಾಸ್, ಬಿಡಿಎ ಕಾಂಪ್ಲೆಕ್ಸ್ ಹತ್ತಿರ, 4ನೇ ಬ್ಲಾಕ್, ಜಯನಗರ, ಬೆಂಗಳೂರು–11.	ನಿಯಮ 7 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯ ಸಂಬಂಧಿಸಿದ ನಿರ್ವಹಣೆ ವಿಭಾಗ.
11.	ಕಾರ್ಯನಿರ್ವಾಹಕ ಇಂಜಿನಿಯರ್, ದಕ್ಷಿಣ–ಪಶ್ಚಿಮ (ನೈರುತ್ಯ) ವಿಭಾಗ, ಬಿಡಬ್ಲ್ಯೂಎಸ್ಎಸ್‌ಬಿ, 27ನೇ ಕ್ರಾಸ್, ಬಿಡಿಎ ಕಾಂಪ್ಲೆಕ್ಸ್ ಹತ್ತಿರ, 4ನೇ ಬ್ಲಾಕ್, ಜಯನಗರ, ಬೆಂಗಳೂರು–11.	ನಿಯಮ 7 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯ ಸಂಬಂಧಿಸಿದ ನಿರ್ವಹಣೆ ವಿಭಾಗ.
12.	ಕಾರ್ಯನಿರ್ವಾಹಕ ಇಂಜಿನಿಯರ್, ಪಶ್ಚಿಮ ವಿಭಾಗ, ಬಿಡಬ್ಲ್ಯೂಎಸ್ಎಸ್‌ಬಿ, ಅರ್ಕಾವತಿ ಭವನ, 2ನೇ ಮಹಡಿ, 5ನೇ ಮೈನ್, 9ನೇ ಕ್ರಾಸ್, ಆರ್‌ಪಿಸಿ ಬಡಾವಣೆ, ಬೆಂಗಳೂರು–40.	ನಿಯಮ 7 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯ ಸಂಬಂಧಿಸಿದ ನಿರ್ವಹಣೆ ವಿಭಾಗ.
13.	ಕಾರ್ಯನಿರ್ವಾಹಕ ಇಂಜಿನಿಯರ್, ಸೌತ್ ಈಸ್ಟ್ (ಆಗ್ನೇಯ) ವಿಭಾಗ, ಬಿಡಬ್ಲ್ಯೂಎಸ್ಎಸ್‌ಬಿ, 10ನೇ ಮೈನ್, 15ನೇ ಕ್ರಾಸ್, 2ನೇ ಹಂತ, ಇಂದಿರಾ ನಗರ, ಬೆಂಗಳೂರು–38.	ನಿಯಮ 7 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯ ಸಂಬಂಧಿಸಿದ ನಿರ್ವಹಣೆ ವಿಭಾಗ.
14.	ಕಾರ್ಯನಿರ್ವಾಹಕ ಇಂಜಿನಿಯರ್, ಪೂರ್ವವಿಭಾಗ, ಬಿಡಬ್ಲ್ಯೂಎಸ್ಎಸ್‌ಬಿ, 10ನೇ ಮೈನ್, 15ನೇ ಕ್ರಾಸ್, 2ನೇ ಹಂತ, ಇಂದಿರಾನಗರ, ಬೆಂಗಳೂರು–38.	ನಿಯಮ 7 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯ ಸಂಬಂಧಿಸಿದ ನಿರ್ವಹಣೆ ವಿಭಾಗ.
15.	ಕಾರ್ಯನಿರ್ವಾಹಕ ಇಂಜಿನಿಯರ್, ಉತ್ತರ ವಿಭಾಗ, ಬಿಡಬ್ಲ್ಯೂಎಸ್ಎಸ್‌ಬಿ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು–55.	ನಿಯಮ 7 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯ ಸಂಬಂಧಿಸಿದ ನಿರ್ವಹಣೆ ವಿಭಾಗ.
16.	ಕಾರ್ಯನಿರ್ವಾಹಕ ಇಂಜಿನಿಯರ್, ಉತ್ತರ ಪೂರ್ವ (ಈಶಾನ್ಯ) ವಿಭಾಗ, ಬಿಡಬ್ಲ್ಯೂಎಸ್ಎಸ್‌ಬಿ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು–55.	ನಿಯಮ 7 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯ ಸಂಬಂಧಿಸಿದ ನಿರ್ವಹಣೆ ವಿಭಾಗ.

17.	ಕಾರ್ಯನಿರ್ವಾಹಕ ಇಂಜಿನಿಯರ್, ಉತ್ತರ ಪಶ್ಚಿಮ (ವಾಯುವ್ಯ) ವಿಭಾಗ, ಬಿಡಬ್ಲ್ಯೂಎಸ್‌ಎಸ್‌ಬಿ, ಮೋದಿ ಆಸ್ಪತ್ರೆ ರಸ್ತೆ, ಪಶ್ಚಿಮ ಕಾರ್ಡ್ ರಸ್ತೆ, ಬೆಂಗಳೂರು.	ನಿಯಮ 7 ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯ ಸಂಬಂಧಿಸಿದ ನಿರ್ವಹಣೆ ವಿಭಾಗ.
18.	ಹಿರಿಯ ಭೂವಿಜ್ಞಾನಿ / ಹಿರಿಯ ಭೂ ಭೌತ ವಿಜ್ಞಾನಿ / ಭೂವಿಜ್ಞಾನಿ / ಭೂ ಭೌತ ವಿಜ್ಞಾನಿ, ಅಂತರ್ಜಲ ವಿಭಾಗ, ಗಣಿ ಮತ್ತು ಭೂವಿಜ್ಞಾನ ಇಲಾಖೆ	ಪ್ರಕರಣ 17,31,32,33,34	ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿ
19.	ಜಂಟಿ ಆಯುಕ್ತರು, ಬೃಹತ್ ಬೆಂಗಳೂರು, ಮಹಾ ನಗರ ಪಾಲಿಕೆ, ವಲಯವಾರು.	ಪ್ರಕರಣ 17,31,32,33,34	ಅಧಿಕಾರ ವ್ಯಾಪ್ತಿ ಪ್ರದೇಶ
20.	ಸಹಾಯಕ ಆಯುಕ್ತರು ಸಂಬಂಧಪಟ್ಟ ಕಂದಾಯ ಉಪ ವಿಭಾಗ.	ಪ್ರಕರಣ 17,31,32,33,34	ಅಧಿಕಾರ ವ್ಯಾಪ್ತಿ ಪ್ರದೇಶ
21.	ತಹಸೀಲ್ದಾರ್, ಸಂಬಂಧಪಟ್ಟ ತಾಲ್ಲೂಕು	ಪ್ರಕರಣ 17,31,32,33,34	ಅಧಿಕಾರ ವ್ಯಾಪ್ತಿ ಪ್ರದೇಶ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ...ದ್ದಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ(ಸಣ್ಣ ನೀರಾವರಿ)

ಸಂಕಲನಕಾರರು:

ಕರ್ನಾಟಕ ರಾಜ್ಯ ಪತ್ರ ಬೆಂಗಳೂರು – ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಲ್ಲಿಸುವುದು.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3. ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
4. ಪ್ರಾದೇಶಿಕ ನಿರ್ದೇಶಕರು, ಕೇಂದ್ರಿಯ ಅಂತರ್ಜಲ ಮಂಡಳಿ, ಭಾರತ ಸರ್ಕಾರ.
5. ಕೃಷಿ ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
6. ಅಧ್ಯಕ್ಷರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು.
7. ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
8. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಪೋಲಿಸ್ ಆಯುಕ್ತರು, ಬೆಂಗಳೂರು ಮಹಾನಗರ, ಬೆಂಗಳೂರು.
10. ಮುಖ್ಯ ಇಂಜನಿಯರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ಮುಖ್ಯ ಇಂಜನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದರಾವ್ ವೃತ್ತ, ಬೆಂಗಳೂರು.
12. ಮುಖ್ಯ ಮಹಾ ಪ್ರಬಂಧಕರು, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್, ಬೆಂಗಳೂರು.

13. ಮುಖ್ಯ ಇಂಜಿನಿಯರ್, ಕರ್ನಾಟಕ ನಗರ ನೀರು ಸರಬರಾಜು ಮತ್ತು ಅಭಿವೃದ್ಧಿ ಮಂಡಳಿ, ಬೆಂಗಳೂರು.
14. ಪ್ರಧಾನ ಇಂಜಿನಿಯರ್, ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿ, ಬೆಂಗಳೂರು ಇವರ ಮೂಲಕ (ಸಂಬಂಧ ಪಟ್ಟ ಕಾರ್ಯಪಾಲಕ ಇಂಜಿನಿಯರ್‌ಗಳಿಗೆ).
15. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ದಕ್ಷಿಣ) ವಲಯ, ಬೆಂಗಳೂರು.
16. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
17. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಬೆಂಗಳೂರು.
18. ಜಂಟಿ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, (ದಕ್ಷಿಣ) ವಲಯ, ಮೈಸೂರು.
19. ಪರಿಸರ ಅಧಿಕಾರಿ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು.
20. ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು ಇವರ ಮಾಹಿತಿಗಾಗಿ.
21. ~~ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ನಗರಾಭಿವೃದ್ಧಿ ಇಲಾಖೆಯ ಸಚಿವರ ಆಪ್ತ~~ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು – ಇವರಿಗೆ ಮಾಹಿತಿಗಾಗಿ
22. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಲೋಕೋಪಯೋಗಿ ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
23. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
24. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.